# Akashvani : Bangalore
# National Bulletin In Kannada
# 08.02.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ದೆಹಲಿ ವಿಧಾನಸಭಾ ಚುನಾವಣೆ; ಬಿಜೆಪಿಗೆ ಭರ್ಜರಿ ಜಯ; ಸುಮಾರು ಮೂರು ದಶಕಗಳ ನಂತರ ಅಧಿಕಾರದತ್ತ

೨. ಬಿಜೆಪಿ ಗೆಲುವು ಕೇಂದ್ರದ ಜನಪರ ಕಾರ್ಯಕ್ರಮಗಳಿಗೆ ದೊರೆತ ಮನ್ನಣೆ -ಪ್ರಧಾನಮಂತ್ರಿ ನರೇಂದ್ರ ಮೋದಿ

೩. ಅರವಿಂದ್ ಕೇಜ್ರಿವಾಲ್ ಸೇರಿದಂತೆ ಪ್ರಮುಖ ಆಪ್ ಧುರೀಣರ ಪರಾಭವ

೪. ಆರ್ಥಿಕ ಬೆಳವಣಿಗೆ ಉತ್ತೇಜನ ನೀಡಲು ಹಣಕಾಸು ನೀತಿ ಒತ್ತಾಸೆ - ಸಚಿವೆ ನಿರ್ಮಲಾ ಸೀತಾರಾಮನ್

**<><*<><>*><>**

ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿ ಭರ್ಜರಿ ಜಯ ಸಾಧಿಸಿದೆ. ಅಧಿಕಾರರೂಢ ಆಮ್ ಆದ್ಮಿ ಪಕ್ಷವನ್ನು ಸೋಲಿಸುವ ಮೂಲಕ ಸುಮಾರು ೨೭ ವರ್ಷಗಳ ನಂತರ ದೆಹಲಿಯಲ್ಲಿ ಅಧಿಕಾರಕ್ಕೆ ಬರಲು ಬಿಜೆಪಿ ಸನ್ನದ್ಧವಾಗಿದೆ. ಒಟ್ಟು ೭೦ ವಿಧಾನಸಭಾ ಕ್ಷೇತ್ರಗಳ ಪೈಕಿ ಬಿಜೆಪಿ ೪೭ ಕ್ಷೇತ್ರಗಳಲ್ಲಿ ಗೆಲುವು ದಾಖಲಿಸಿದ್ದು, ೧ ಕ್ಷೇತ್ರದಲ್ಲಿ ಮುನ್ನಡೆಯಲ್ಲಿದೆ. ಆಮ್ ಆದ್ಮಿ ಪಕ್ಷಕ್ಕೆ ೨೨ ಸ್ಥಾನಗಳನ್ನು ಪಡೆದುಕೊಳ್ಳಲು ಸಾಧ್ಯವಾಗಿದೆ. ಕಾಂಗ್ರೆಸ್ ಪಕ್ಷಕ್ಕೆ ಯಾವುದೇ ಸ್ಥಾನ ಪಡೆದುಕೊಳ್ಳಲು ಸಾಧ್ಯವಾಗಿಲ್ಲ. ಬಿಜೆಪಿಯ ಪರ್ವೇಶ್ ಸಾಯಿಬ್ ಸಿಂಗ್- ನವದೆಹಲಿ ಕ್ಷೇತ್ರದಿಂದ, ವಿಜೇಂದ್ರ ಗುಪ್ತಾ - ರೋಹಿಣಿಯಿಂದ- ಕಪಿಲ್ ಮಿಸ್ರಾ- ಕರ್ವಾಲ್ ನಗರದಿಂದ- ತರವಿಂದರ್ ಸಿಂಗ್ ಮಾರ್ವಾ- ಜುಂಗ್‌ಪುರದಿಂದ- ಮಂಜೀಂದರ್ ಸಿಂಗ್ ಸಿರ್ಸಾ- ರಜೌರಿ ಗಾರ್ಡನ್‌ನಿಂದ ಅರವಿಂದರ್ ಸಿಂಗ್ ಲವ್ಲಿ- ಗಾಂಧಿನಗರದಿಂದ ಶೀಕಾರಾಯ್ - ಗ್ರೇಟರ್ ಕೈಲಾಶ್‌ದಿಂದ- ಹರೀಶ್ ಖುರಾನ ಮೋತಿ ನಗರದಿಂದ ಜಯಗಳಿಸಿದ್ದಾರೆ. ಕೈಲಾಶ್ ಗೆಹ್ಲೋಟ್, ಕಾರ್ನಿಲ್ ಸಿಂಗ್, ನೀರಜ್ ಬಸೋಯಾ, ಉಮಂಕ್ ಬಜಾಜ್ ಗೆಲುವು ದಾಖಲಿಸಿದ ಬಿಜೆಪಿ ಯ ಇತರ ಪ್ರಮುಖರಾಗಿದ್ದಾರೆ. ಆಪ್ ಪಕ್ಷದ ಅಭ್ಯರ್ಥಿಗಳಾದ ಅತಿಶಿ ಕಲ್ಕಾಜಿಯಿಂದ, ಸೋಮ್‌ದತ್ ಸರ್ಧಾರ್ ಬಜಾರ್‌ದಿಂದ ಜಯಗಳಿಸಿದ್ದಾರೆ. ಗೋಪಾಲ್ ರೈ, ವೀರೇಂದ್ರ ಸಿಂಗ್, ಕುಲ್‌ದೀಪ್ ಕುಮಾರ್, ಜರ್ನಿಲ್ ಸಿಂಗ್, ಇಮ್ರಾನ್ ಹುಸೇನ್ ಗೆಲುವು ಸಾಧಿಸಿದ ಆಪ್ ನಾಯಕರಾಗಿದ್ದಾರೆ. ಹಿರಿಯ ಆಪ್ ಧುರೀಣ ಅರವಿಂದ ಕೇಜ್ರಿವಾಲ್, ಮನೀಶ್ ಸಿಸೋಡಿಯಾ, ಸೌರವ್ ಭಾರದ್ವಜ್, ದುರ್ಗೇಶ್ ಪಾಠಕ್ ಪರಾಭವಗೊಂಡಿದ್ದಾರೆ. ಕಾಂಗ್ರೆಸ್‌ನ ಸಂದೀಪ್ ದೀಕ್ಷಿತ್, ಬಿಜೆಪಿಯ ರಮೇಶ್ ಬಿಡೂರಿ ಮತ್ತು ರಾಜ್‌ಕುಮಾರ್ ಆನಂದ್ ಸೋಲು ಕಂಡಿದ್ದಾರೆ.

<><*<><>*><>

ಉತ್ತರಪ್ರದೇಶದ ಮಿಲ್ಕಿಪುರ ವಿಧಾನಸಭಾ ಕ್ಷೇತ್ರಕ್ಕಾಗಿ ನಡೆದ ಉಪಚುನಾವಣೆಯಲ್ಲಿ ಬಿಜೆಪಿಯ ಚಂದ್ರಬಾನು ಪಾಸ್ವಾನ್ ಗೆಲುವು ಸಾಧಿಸಿದ್ದಾರೆ. ತಮಿಳುನಾಡಿನ ಈರೋಡ್ ವಿಧಾನಸಭಾ ಉಪಚುನಾವಣೆಯಲ್ಲಿ ದ್ರಾವಿಡ ಮುನ್ನೇತ್ರ ಕಳಗಂ ಪಕ್ಷದ ಚಂದಿರಕುಮಾರ್ ವಿ.ಸಿ ಮುನ್ನಡೆಯಲಿದ್ದಾರೆ.

<><*<><>*><>

ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿ ಅಭೂತಪೂರ್ವ ಜಯಗಳಿಸಿದೆ. ಇದು ಅಭಿವೃದ್ಧಿಗೆ ಮತ್ತು ಉತ್ತಮ ಆಡಳಿತಕ್ಕೆ ಸಂದ ಜಯ ಎಂದು ಹಿರಿಯ ಬಿಜೆಪಿ ಧುರೀಣ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಐತಿಹಾಸಿಕ ಜನಾದೇಶವನ್ನು ಕೊಟ್ಟಿರುವ ದೆಹಲಿಯ ಜನತೆಗೆ ಧನ್ಯವಾದ ತಿಳಿಸಿರುವ ಪ್ರಧಾನಿ, ದೆಹಲಿಯ ಸಂಪೂರ್ಣ ಅಭಿವೃದ್ಧಿ, ಜನಜೀವನದ ಗುಣಮಟ್ಟ ಸುಧಾರಣೆ ಹಾಗೂ ವಿಕಸಿತ ಭಾರತ ನಿರ್ಮಿಸುವ ಭರವಸೆ ನೀಡುವುದಾಗಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಪಕ್ಷಕ್ಕಾಗಿ ಶ್ರಮಿಸಿ ಗೆಲುವಿಗೆ ಕಾರಣರಾದ ಕಾರ್ಯಕರ್ತರಿಗೂ ಪ್ರಧಾನಿ ನರೇಂದ್ರ ಮೋದಿ ಧನ್ಯವಾದ ತಿಳಿಸಿದ್ದಾರೆ. ಗೆಲುವಿನ ಬಗ್ಗೆ ಹಿರಿಯ ಬಿಜೆಪಿ ಮುಖಂಡ ಹಾಗೂ ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ಈ ರೀತಿ ತಿಳಿಸಿದ್ದಾರೆ.

**ಧ್ವನಿ: ಡಾ. ಜಿತೇಂದ್ರ ಸಿಂಗ್, ಕೇಂದ್ರ ಸಚಿವ ( ೨೦ ಸೆಕೆಂಡ್)**

ದೆಹಲಿ ವಿಧಾನಸಭಾ ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಪದೆ ಪದೇ ಸುಳ್ಳು ಭರವಸೆಗಳನ್ನು ನೀಡಿ ಸಾರ್ವಜನಿಕರನ್ನು ದಾರಿತಪ್ಪಿಸಲು ಸಾಧ್ಯವಿಲ್ಲ ಎಂಬುದನ್ನು ದೆಹಲಿಯ ಜನರು ತೋರಿಸಿಕೊಟ್ಟಿದ್ದಾರೆ ಎಂದಿದ್ದಾರೆ. ಈ ಗೆಲುವು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು ಬಿಜೆಪಿಯ ನೀತಿಗಳ ಮೇಲಿನ ಜನರು ನಂಬಿಕೆಯ ವಿಜಯವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಈ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿಯವರ ವಿಶ್ವಾಸಾರ್ಹತೆ ಮತ್ತು ಉತ್ತಮ ಆಡಳಿತದಲ್ಲಿ ನಂಬಿಕೆ ಇದೆ ಎಂದರು. ಈ ಐತಿಹಾಸಿಕ ಜನಾದೇಶವು ದೆಹಲಿಯ ಉಜ್ವಲ ಮತ್ತು ಹೆಚ್ಚು ಪ್ರಗತಿಪರ ಭವಿಷ್ಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರ ಮೇಲೆ ಜನರ ನಂಬಿಕೆಯನ್ನು ತೋರಿಸುತ್ತದೆ ಎಂದು ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಹೇಳಿದ್ದಾರೆ.

<><*<><>*><>

ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರು, ತಮ್ಮ ಪಕ್ಷವು ದೆಹಲಿ ವಿಧಾನಸಭಾ ಚುನಾವಣೆಯ ಫಲಿತಾಂಶವನ್ನು ಒಪ್ಪಿಕೊಂಡಿದೆ ಮತ್ತು ಜನರು ನೀಡಿದ ಜನಾದೇಶವನ್ನು ಗೌರವಿಸುತ್ತದೆ ಎಂದು ಹೇಳಿದ್ದಾರೆ. ಭಾರತೀಯ ಜನತಾ ಪಾರ್ಟಿಯನ್ನು ಅಭಿನಂದಿಸಿರುವ ಅವರು, ಬಿಜೆಪಿಯು ಜನರ ಆಶೋತ್ತರಗಳನ್ನು ಈಡೇರಿಸುತ್ತದೆ ಎಂದು ಅರವಿಂದ್ ಕೇಜ್ರಿವಾಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<><>*><>

ಆಮ್ ಆದ್ಮಿ ಪಕ್ಷದ ಹಿರಿಯ ನಾಯಕಿ ಅತಿಶಿ ಅವರು, ಕಲ್ಕಾಜಿ ಕ್ಷೇತ್ರದ ಜನತೆಯು ತಮಗೆ ನೀಡಿರುವ ಆದೇಶಕ್ಕಾಗಿ ಧನ್ಯವಾದಗಳನ್ನು ತಿಳಿಸಿದ್ದಾರೆ. ದೆಹಲಿ ವಿಧಾನಸಭಾ ಚುನಾವಣೆಯಲ್ಲಿನ ತಮ್ಮ ಗೆಲುವಿನ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ತಮ್ಮ ಪಕ್ಷವು ಜನತೆಯ

ಆದೇಶವನ್ನು ಸ್ವೀಕರಿಸುತ್ತದೆ ಎಂದು ಹೇಳಿದ್ದಾರೆ. ಚುನಾವಣಾ ಪ್ರಚಾರದಲ್ಲಿ ಪಾಲ್ಗೊಂಡಿದ್ದ ತಮ್ಮ ಪಕ್ಷದ ಕಾರ್ಯಕರ್ತರಿಗೂ ಧನ್ಯವಾದಗಳನ್ನು ತಿಳಿಸಿದ್ದಾರೆ.

<><*<><>*><>

ಆರ್ಥಿಕ ಬೆಳವಣಿಗೆಯ ಬಲವರ್ಧನೆಗೆ ಹಣಕಾಸು ನೀತಿಗಳು ಪೂರಕವಾಗಿವೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ದೆಹಲಿಯಲ್ಲಿಂದು ಹಿರಿಯ ಆರ್‌ಬಿಐ ಅಧಿಕಾರಿಗಳೊಂದಿಗೆ ಬಜೆಟ್ ಮಂಡನೆ ನಂತರದ ಸಾಂಪ್ರದಾಯಿಕ ಸಭೆ ನಡೆಸಿದ ಬಳಿಕ ಅವರು, ಸುದ್ದಿಗಾರರೊಂದಿಗೆ ಮಾತನಾಡಿದರು. ಕೇಂದ್ರ ಬಜೆಟ್ ಹಾಗೂ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ, ಇತ್ತೀಚಿಗೆ ತೆಗೆದುಕೊಂಡ ನಿರ್ಧಾರಗಳು ಆರ್ಥಿಕ ಬೆಳವಣಿಗೆಗೆ ಒತ್ತಾಸೆ ನೀಡಲಿವೆ ಎಂದರು. ಉದ್ದಿಮೆಗಳ ಬಳಕೆಯ ಪರಿಸ್ಥಿತಿಯಲ್ಲಿ ಸುಧಾರಣೆ ಕಂಡುಬಂದಿದ್ದು, ಸಾಮರ್ಥ್ಯ ಬಳಕೆ ಉತ್ತಮಗೊಳ್ಳುತ್ತಿದೆ. ಕೇಂದ್ರ ಸರ್ಕಾರ ಹಾಗೂ ಕೇಂದ್ರೀಯ ಬ್ಯಾಂಕ್ ನಡುವೆ ಉತ್ತಮ ಸಹಯೋಗ ಇದ್ದು, ಯಾವುದೇ ಪರಸ್ಪರ ಅಧಿಕಾರ ಏರಿಕೆ ಇಲ್ಲ ಎಂದು ಹಣಕಾಸು ಸಚಿವರು ತಿಳಿಸಿದರು. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಮತ್ತು ನಿರ್ದೇಶಕರ ಕೇಂದ್ರೀಯ ಮಂಡಳಿಯ ಸದಸ್ಯರೊಂದಿಗೆ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ರಾಜ್ಯ ಸಚಿವ ಪಂಕಜ್ ಚೌಧರಿ ಸಭೆ ನಡೆಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ಇದೇ ಸೋಮವಾರ ಬೆಳಗ್ಗೆ ೧೧ ಗಂಟೆಗೆ ಜರುಗಲಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಸೋಮವಾರದಿಂದ ಫ್ರಾನ್ಸ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ದೆಹಲಿಯಲ್ಲಿ ತಿಳಿಸಿದ್ದಾರೆ. ಇದೇ ತಿಂಗಳ ೧೨ ಮತ್ತು ೧೩ ರಂದು ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾಕ್ಕೆ ಭೇಟಿ ನೀಡಲಿದ್ದು, ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿರುವ ರಕ್ಷಣಾ ಕ್ಷೇತ್ರದ ನವರತ್ನ ಸಾರ್ವಜನಿಕ ಉದ್ದಿಮೆ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್-ಬಿಇಎಲ್, ನೌಕಾಪಡೆಗೆ ಸುಮಾರು ಸುಮಾರು ೬೧೦ ಕೋಟಿ ರೂಪಾಯಿ ಮೌಲ್ಯದ ಉಪಕರಣ ವ್ಯವಸ್ಥೆ ಸರಬರಾಜು ಮಾಡುವ ಬೇಡಿಕೆ ಪಡೆದುಕೊಂಡಿದೆ. ಬಿಇಎಲ್ ಭಾರತೀಯ ನೌಕಾಪಡೆಗೆ ಎಲೆಕ್ಟ್ರೋ ಆಪ್ಟಿಕ್ ಫೈರ್ ಕಂಟ್ರೋಲ್ ಸಿಸ್ಟಮ್ ಪೂರೈಸುವ ಒಪ್ಪಂದಕ್ಕೆ ಸಹಿ ಹಾಕಿದೆ. ಇದರನ್ವಯ ದೇಶೀಯವಾಗಿ ಅಭಿವೃದ್ಧಿಪಡಿಸಲಾದ ಈ ವ್ಯವಸ್ಥೆಯನ್ನು ಭಾರತೀಯ ನೌಕಾ ವೇದಿಕೆಗಳಲ್ಲಿ ಸಮಗ್ರಗೊಳಿಸಿ ಸ್ಥಾಪಿಸಲಾಗುವುದು. ಈ ವ್ಯವಸ್ಥೆ ಅಲ್ಪ ಹಾಗೂ ಮಧ್ಯಮ ವ್ಯಾಪ್ತಿಯ ನಿಗದಿತ ಗುರಿಗಳನ್ನು ಹಗಲು ರಾತ್ರಿ ಉಸ್ತುವಾರಿ ನಡೆಸುವ ಕಾರ್ಯತಂತ್ರವನ್ನು ಒಳಗೊಂಡಿದೆ.

**<><*<><>*><>**

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ಇದೇ ಸೋಮವಾರ ಆರಂಭವಾಗಲಿದೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳು ತಾಲೀಮು ನಡೆಸುತ್ತಿವೆ.

**<><*<><>*><>**

ಅಗ್ಮೆಂಟೆಡ್ ರಿಯಾಲಿಟಿ, ವರ್ಚುವಲ್ ರಿಯಾಲಿಟಿ, ವಿಸ್ತೃತ ರಿಯಾಲಿಟಿಯಂತಹ ವಿವಿಧ ತಾಂತ್ರಿಕ ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸಲು ಮೂಲ ಸಂಶೋಧನೆ ಹಾಗೂ ಹೆಚ್ಚುವರಿ ಚಿಂತನೆ ಮುಂದುವರಿಸುವ ಅಗತ್ಯವಿದೆ ಎಂದು ವಾರ್ತಾ ಮತ್ತು ಪ್ರಸಾರ ಖಾತೆ ಜಂಟಿ ಕಾಯದರ್ಶಿ ಆಶುತೋಶ್ ಮೊಹಾಲೆ ಹೇಳಿದ್ದಾರೆ. ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯ ಮತ್ತು ವೇವ್ಸ್ -೨೦೨೫, ಹಾಗೂ ಕ್ರಿಯೇಟ್ ಇನ್ ಇಂಡಿಯಾ ಸಹಯೋಗದೊಂದಿಗೆ ನೋಯ್ಡಾದಲ್ಲಿ ಇಂದು ನಡೆದ ಎಕ್ಸ್ ಆರ್ ಕ್ರಿಯೇಟರ್ ಹ್ಯಾಕತಾನ್- ದೆಹಲಿ ಮೀಟಪ್ ನಲ್ಲಿ ಭಾಗವಹಿಸಿ ಅವರು ಮಾತನಾಡಿದರು.

**ಧ್ವನಿ: ಆಶುತೋಶ್ ಮೊಹಾಲೆ ವಾರ್ತಾ ಮತ್ತು ಪ್ರಸಾರ ಖಾತೆ ಜಂಟಿ ಕಾಯದರ್ಶಿ ( ೨೫ ಸೆಕೆಂಡ್)**

ಹ್ಯಾಕಥಾನ್ ನಲ್ಲಿ ಸುಮಾರು ೨ ಸಾವಿರದ ೨೦೦ ರಷ್ಟು ಉತ್ಸಾಹಿಗಳು ಭಾಗವಹಿಸಿದ್ದು, ೪೦ ಮಂದಿ ಅಂತಿಮ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರದೇಶ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**